# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **780 (935)**

**ಸದಸ್ಯರ ಹೆಸರು** : **ಡಾ. ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು)**

**ಉತ್ತರಿಸುವ ದಿನಾಂಕ** : **14.07.2023**

**ಉತ್ತರಿಸುವವರು** : **ಮಾನ್ಯಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ಜಿಲ್ಲೆಗಳಲ್ಲಿ ಜಿಲ್ಲಾ ಪಂಚಾಯತ್ ದಿಂದ ನಿರ್ಮಿಸಿದ ಶೌಚಾಲಯಗಳ ಸಂಖ್ಯೆ ಎಷ್ಟು; (ಕಳೆದ ಎರಡು ವರ್ಷಗಳ ವಿವರ ನೀಡುವುದು) | ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯಡಿ ಕಲಬುರಗಿ ಜಿಲ್ಲೆಗಳಲ್ಲಿ ಜಿಲ್ಲಾ ಪಂಚಾಯತ್ ದಿಂದ 8199 ಶೌಚಾಲಯಗಳನ್ನು ನಿರ್ಮಿಸಲಾಗಿರುತ್ತದೆ. |
| (ಆ) | ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಕುಟುಂಬಗಳಿಗೆ ವೈಯಕ್ತಿಕ ಶೌಚಾಲಯಗಳನ್ನು ಕಲ್ಪಿಸಬೇಕಾಗಿದೆ; | ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯಡಿ ಕಲಬುರಗಿ ಜಿಲ್ಲೆಯಲ್ಲಿ 26446 ವೈಯಕ್ತಿಕ ಗೃಹ ಶೌಚಾಲಯಗಳನ್ನು ಕಲ್ಪಿಸಬೇಕಾಗಿದೆ. |
| (ಇ) | ಎಲ್ಲಾ ಕುಟುಂಬಗಳಿಗೆ ವೈಯಕ್ತಿಕ ಶೌಚಾಲಯಗಳನ್ನು ಕಲ್ಪಿಸಲು ಜಿಲ್ಲಾ ಪಂಚಾಯತ್ ದಿಂದ ಕೈಗೊಂಡ ಕ್ರಮಗಳೇನು; | ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯ ಹಂತ-2ರ ಮಾರ್ಗಸೂಚಿಯನ್ವಯ ವೈಯಕ್ತಿಕ ಗೃಹ ಶೌಚಾಲಯಗಳನ್ನು ನಿರ್ಮಿಸಲು ಅವಕಾಶ ಕಲ್ಪಿಸಿದ್ದು, ಶೌಚಾಲಯ ರಹಿತ ಕುಟುಂಬಗಳು, ಶೌಚಾಲಯಗಳನ್ನು ನಿರ್ಮಾಣ ಮಾಡಿಕೊಳ್ಳುವಂತೆ ವಿವಿಧ ರೀತಿಯ ಮಾಹಿತಿ ಶಿಕ್ಷಣ ಮತ್ತು ಸಂವಹನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ |
| (ಈ) | ಶೌಚಾಲಯಗಳನ್ನು ಕಲ್ಪಿಸಲು ಮತ್ತು ಅವುಗಳು ಸೂಕ್ತ ಬಳಕೆಯಾಗುವಂತೆ ಸಂಬಂಧಪಟ್ಟ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಸರ್ಕಾರ ಸೂಕ್ತ ಆದೇಶ ಹೊರಡಿಸಿದೆಯೇ; ಇಲ್ಲವಾದಲ್ಲಿ ಸರ್ಕಾರ ಸೂಕ್ತ ಆದೇಶ ಹೊರಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು) | ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯಡಿ ವೈಯಕ್ತಿಕ ಗೃಹ ಶೌಚಾಲಯಗಳನ್ನು ನಿರ್ಮಾಣ ಮಾಡಲು ಸುತ್ತೋಲೆಗಳನ್ನು ಹೊರಡಿಸಲಾಗಿದೆ. ಪ್ರಸ್ತುತ ಶೌಚಾಲಯ ರಹಿತ ಕುಟುಂಬಗಳಿಗೆ ಶೌಚಾಲಯಗಳನ್ನು ನಿರ್ಮಾಣ ಮಾಡಲು ಕೇಂದ್ರ ಸರ್ಕಾರವು Citizen App ಅನ್ನು ಜಾರಿಗೆ ತಂದಿದ್ದು, ಈ App ನಲ್ಲಿ ಶೌಚಾಲಯ ರಹಿತ ಫಲಾನುಭವಿಗಳು ನೇರವಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಈ ರೀತಿ ಅರ್ಜಿಗಳನ್ನು ಸ್ವೀಕರಿಸಿದ ನಂತರ, ಗ್ರಾಮ ಪಂಚಾಯಿತಿ/ ಜಿಲ್ಲಾ ಪಂಚಾಯಿತಿ ಹಂತದಲ್ಲಿ ಪರಿಶೀಲಿಸಿ, ಅರ್ಹ ಫಲಾನುಭವಿಗಳಿಗೆ ಶೌಚಾಲಯಗಳನ್ನು ನಿರ್ಮಿಸಲು ಕ್ರಮವಹಿಸಲಾಗಿದೆ.<br>ಗ್ರಾಮೀಣ ಜನರಿಗೆ ಶೌಚಾಲಯದ ಬಳಕೆ ಮತ್ತು ನಿರ್ವಹಣೆಯ ಬಗ್ಗೆ ಹೆಚ್ಚಿನ ಅರಿವು ಮೂಡಿಸಲು ವಿವಿಧ ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. |

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು